ಜಿಲ್ಲಾಧಿಕಾರಿಗಳ ಕಾರ್ಯಾಲಯ, ಧಾರವಾಡ-580001
Deputy Commissioner Office, Dharwad-580001
e-mail :
deo.dharwad@gmail.com

ಕರ್ನಾಟಕ ಸರ್ಕಾರ
Govt.of karnataka

ದೂರವಾಣಿ: 0836-2233840, 2233880,
(ಫ್ಯಾಕ್ಸ್) 0836-2747102,
website:
www.dharwad.nic,in

ಕ್ರ: ಎಮ್.ಎಜಿ/ಶಾಸು/ವಹಿ/15/2021-22

ದಿನಾಂಕ: 05-06-2021

# ಆದೇಶ

**ವಿಷಯ:** ಧಾರವಾಡ ಜಿಲ್ಲೆಯಾದ್ಯಂತ ಕೋವಿಡ್-19 ತಡೆಗಟ್ಟುವ ಹಿನ್ನಲೆಯಲ್ಲಿ ಸಾರ್ವಜನಿಕರ ಆರೋಗ್ಯ ಕಾಪಾಡುವ ಹಿತದೃಷ್ಟಿಯಿಂದ ಮದುವೆ, ಗೃಹ ಪ್ರವೇಶ, ಹುಟ್ಟು-ಹಬ್ಬ ರಾಜಕೀಯ, ಸಾರ್ವಜನಿಕ ಎಲ್ಲ ಸಮಾರಂಭಗಳನ್ನು ನಿಷೇಧಿಸುವ ಕುರಿತು.

**ಉಲ್ಲೇಖ:** ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬೆಂಗಳೂರು ಇವರ ಪತ್ರ ಕ್ರ:ಆರ್.ಡಿ./158/ಟಿ.ಎನ್.ಆರ್/2020 ದಿನಾಂಕ:03-06-2021

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬೆಂಗಳೂರು ಇವರು ಉಲ್ಲೇಖದಲ್ಲಿ ಹೇಳಿದ ಪತ್ರದನ್ವಯ ಕೋವಿಡ್-19 ಸೋಂಕು ಹರಡದಂತೆ ಸಾರ್ವಜನಿಕರ ಆರೋಗ್ಯ ಕಾಪಾಡುವ ಹಿತದೃಷ್ಟಿಯಿಂದ ಹಾಗೂ ಸದ್ಯದ ಪರಿಸ್ಥಿತಿಯಲ್ಲಿ ಕೋವಿಡ್-19 ಸೋಂಕು ಸಂಪೂರ್ಣವಾಗಿ ನಿಯಂತ್ರಣಕ್ಕೆ ತರುವ ಹಿತದೃಷ್ಟಿಯಿಂದ ಹಲವು ಅನುಸರಣಾ ಕ್ರಮಗಳನ್ನು ಪಾಲಿಸುವಂತೆ ಆದೇಶಿಸಿದ್ದಾರೆ.

ಆದ್ದರಿಂದ ಸದ್ಯದ ಪರಿಸ್ಥಿತಿಯಲ್ಲಿ ಕೋವಿಡ್-19 ಸೋಂಕು ಸಂಪೂರ್ಣವಾಗಿ ನಿಯಂತ್ರಣಕ್ಕೆ ತರುವ ಹಿತದೃಷ್ಟಿಯಿಂದ ರಾಷ್ಟ್ರೀಯ ವಿಪತ್ತು ನಿರ್ವಹಣಾ ಅಧಿನಿಯಮ, 2005ರ ಪ್ರಕರಣ 26 ರಡಿ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ, ಅಧ್ಯಕ್ಷನಾಗಿ ಈ ಕೆಳಗೆ ಸಹಿ ಮಾಡಿರುವ ನಾನು ಧಾರವಾಡ ಜಿಲ್ಲೆಯಾದ್ಯಂತ ಕೋವಿಡ್-19 ಸೋಂಕು ಹರಡದಂತೆ ಪರಿಣಾಮಕಾರಿಯಾದ ಅನುಸರಣಾ ಕ್ರಮ ಜರುಗಿಸುವದಕ್ಕೆ ಸಂಬಂಧಿಸಿ, ಸಾರ್ವಜನಿಕರ ಆರೋಗ್ಯ ಕಾಪಾಡುವ ಹಿತದೃಷ್ಟಿಯಿಂದ ಮುಂಜಾಗೃತಾ ಕ್ರಮವಾಗಿ **ಧಾರವಾಡ ಜಿಲ್ಲೆಯಾದ್ಯಂತ ದಿನಾಂಕ:07-06-2021 ರಿಂದ ದಿನಾಂಕ:14-06-2021ರ ವರೆಗೆ ಜರುಗುವ ಎಲ್ಲ ಮದುವೆ, ಗೃಹ ಪ್ರವೇಶ, ಹುಟ್ಟು-ಹಬ್ಬ ರಾಜಕೀಯ, ಸಾರ್ವಜನಿಕ ಎಲ್ಲ ಸಮಾರಂಭಗಳನ್ನು ಸಂಪೂರ್ಣ ನಿಷೇಧಿಸಲಾಗಿದೆ.**

ಈ ನಿಯಮಗಳನ್ನು ಸಾರ್ವಜನಿಕರು ಪಾಲಿಸದೇ ಇದ್ದಲ್ಲಿ ಅಂತಹವರ ಮೇಲೆ The Epidemic Diseases Act, 1897 (Central Epidemic Act-3 of 1897), The Karnataka Epidemic Diseases COVID-19 Regulations 2020 ರನ್ವಯ ಕಠಿಣ ಕ್ರಮ ಜರುಗಿಸಲಾಗುವುದು ಎಂದು ತಿಳಿಯಪಡಿಸಲಾಗಿದೆ.

ಡಿಸ್ಟ್ರಿಕ್ಟ್ ಮ್ಯಾಜಿಸ್ಟ್ರೇಟ್, ಧಾರವಾಡ
ಡಿಸ್ಟ್ರಿಕ್ಟ್ ಧಾರವಾಡ
DISTRICT MAGISTRATE DHARWAD
DIST. DHARWAD

Pattirwar

ಜಿಲ್ಲಾಧಿಕಾರಿಗಳು
ಧಾರವಾಡ ಜಿಲ್ಲೆ, ಧಾರವಾಡ

ಪ್ರತಿಗಳು:

1. ಪೊಲೀಸ್ ಆಯುಕ್ತರು, ಹುಬ್ಬಳ್ಳಿ-ಧಾರವಾಡ ಮಹಾನಗರ, ಹುಬ್ಬಳ್ಳಿ ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಅಭಿನಂದನೆಗಳೊಂದಿಗೆ ಕಳುಹಿಸಿದೆ.
2. ಆರಕ್ಷಕ ಅಧೀಕ್ಷಕರು, ಧಾರವಾಡ ಜಿಲ್ಲೆ, ಧಾರವಾಡ ಇವರಿಗೆ ಮಾಹಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಅಭಿನಂದನೆಗಳೊಂದಿಗೆ ಕಳುಹಿಸಿದೆ.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ, ಧಾರವಾಡ ಇವರಿಗೆ ಮಾಹಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಅಭಿನಂದನೆಗಳೊಂದಿಗೆ ಕಳುಹಿಸಿದೆ.
4. ಆಯುಕ್ತರು, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ, ಹುಬ್ಬಳ್ಳಿ ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
5. ಉಪವಿಭಾಗಾಧಿಕಾರಿಗಳು, ಧಾರವಾಡ ಇವರಿಗೆ ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
6. ಜಿಲ್ಲೆಯ ಎಲ್ಲ ತಹಶೀಲದಾರರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ

ಅಪರ ಜಿಲ್ಲಾಧಿಕಾರಿಗಳು
ಧಾರವಾಡ ಜಿಲ್ಲೆ, ಧಾರವಾಡ